# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ॥ ಶಿರಗುಪ್ಪಿ ಶುಗರ್ಸ್ ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಸಹ–ವಿದ್ಯುತ್ ಘಟಕದ ಸಾಮರ್ಥ್ಯವನ್ನು 14 ಮೆ.ವ್ಯಾ. ನಿಂದ 20.4 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

3063
29/10/13

ಓದಲಾಗಿದೆ: 1) ಸರ್ಕಾರದ ಪತ್ರ ಸಂಖ್ಯೆ: ಡಿಇ 03 ಎನ್‌ಸಿಇ 2000 ದಿನಾಂಕ: 26.02.2000.
2) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿಎಲ್/04/F-80/2013–14/1868 ದಿನಾಂಕ: 13.7/8.2013.

* * *

**ಪ್ರಸ್ತಾವನೆ:–**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಮೆ॥ ಶಿರಗುಪ್ಪಿ ಶುಗರ್ಸ್ ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಕಾಗವಾಡ ಗ್ರಾಮದಲ್ಲಿ 14 ಮೆ.ವ್ಯಾ (ಗ್ರಾಸ್) 10 ಮೆ.ವ್ಯಾ. (ಎಕ್ಸ್‌ಪೋರ್ಟ್) ಸಾಮರ್ಥ್ಯದ ಸಹ–ವಿದ್ಯುತ್ ಘಟಕ ಸ್ಥಾಪಿಸಲು ಕೆಲವೊಂದು ನಿಬಂಧನೆಗೊಳಪಟ್ಟು ನಿರಾಕ್ಷೇಪಣಾ ಪತ್ರ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರು ಮೆ॥ ಶಿರಗುಪ್ಪಿ ಶುಗರ್ಸ್ ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ರವರು ತಮ್ಮ ಕಂಪನಿಯ ಕಬ್ಬು ಅರೆಯುವ ಸಾಮರ್ಥ್ಯವನ್ನು ಹೆಚ್ಚಿಸಿಕೊಂಡಿರುವುದಾಗಿ ಹಾಗೂ ಹಾಲಿ ಇರುವ ಮೂಲ ಭೂತ ಸೌಕರ್ಯಗಳನ್ನೇ ಉಪಯೋಗಿಸಿಕೊಂಡು ಘಟಕದ ಸಾಮರ್ಥ್ಯವನ್ನು 14 ಮೆ.ವ್ಯಾ ನಿಂದ 20.4 ಮೆ.ವ್ಯಾ.ಗೆ ಹೆಚ್ಚಿಸಲು ಹಾಗೂ ಋತುವಿನಲ್ಲಿ 12 ಮೆ.ವ್ಯಾ., ಋತುವಲ್ಲದ ಅವಧಿಯಲ್ಲಿ 19 ಮೆ.ವ್ಯಾ ಸಹ–ವಿದ್ಯುತ್ ಸಾಮರ್ಥ್ಯವನ್ನು ವಿದ್ಯುತ್ ಜಾಲಕ್ಕೆ ಎಕ್ಸ್‌ಪೋರ್ಟ್ ಮಾಡುವುದಾಗಿ ತಿಳಿಸಿರುವುದರಿಂದ ಅಭಿವೃದ್ಧಿದಾರರ ಕೋರಿಕೆಯಂತೆ, ನಿರಾಕ್ಷೇಪಣಾ ಪತ್ರ ನೀಡಬಹುದೆಂದು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:–

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 221 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 01.10.2013.**

ಮೆ॥ ಶಿರಗುಪ್ಪಿ ಶುಗರ್ಸ್ ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಇವರು ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಕಾಗವಾಡ ಗ್ರಾಮದಲ್ಲಿ ಸ್ಥಾಪಿಸಿರುವ 14 ಮೆ.ವ್ಯಾ. ಸಾಮರ್ಥ್ಯದ ಸಹ–ವಿದ್ಯುತ್ ಘಟಕದ ಸಾಮರ್ಥ್ಯವನ್ನು 20 ಮೆ.ವ್ಯಾ.ಗೆ ಹೆಚ್ಚಿಸಿ, ಈ ಪೈಕಿ ಋತುವಿನಲ್ಲಿ 12 ಮೆ.ವ್ಯಾ ಹಾಗೂ ಋತುವಲ್ಲದ ಅವಧಿಯಲ್ಲಿ 19 ಮೆ.ವ್ಯಾ ಸಾಮರ್ಥ್ಯದ ವಿದ್ಯುತ್‌ನ್ನು ಎಕ್ಸ್‌ಪೋರ್ಟ್ ಮಾಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸಾಮರ್ಥ್ಯ ಹೆಚ್ಚಿಸಿ ಆದೇಶಿಸಲಾಗಿದೆ.

1. The company shall obtain separate clearance from Karnataka Power Transmission Corporation Limited in respect of evacuation of power.
2. The company shall enter into power purchase agreement/Wheeling & Banking/ Captive use for selling of power. With Concerned Escom.
3. The company shall obtain necessary statutory clearance wherever required from the respective Departments / Organizations such as Forest Department, Revenue Department, & Karnataka State Pollution Control Board, etc. for the Power plant.
4. The Detailed Project Report (D.P.R.) for the power plant shall be got approved by Karnataka Renewable Energy Development Limited, before the commencement of the power plant.

........2)

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ವಿಕಾಸ ಸೌಧ, ಬೆಂಗಳೂರು-1.
2 ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ನವನಗರ, ಹುಬ್ಬಳ್ಳಿ-580 025.
9 ಮೆ॥ ಶಿರಗುಪ್ಪಿ ಶುಗರ್ಸ್ ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಕಾಗವಾಡ ಗ್ರಾಮ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
10 ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.